ಜನರು ಉಪವಾಸವನ್ನು ಬೇಗನೆ ತೊರೆಯುವವರೆಗೆ ಅವರು ಒಳಿತಿನಲ್ಲಿರುತ್ತಾರೆ

ಸಹ್ಲ್ ಬಿನ್ ಸಅದ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಜನರು
ಉಪವಾಸವನ್ನು ಬೇಗನೆ ತೊರೆಯುವವರೆಗೆ ಅವರು ಒಳಿತಿನಲ್ಲಿರುತ್ತಾರೆ."
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಜನರು ಉಪವಾಸದ ಸಮಯದಲ್ಲಿ ಸೂರ್ಯಾಸ್ತವನ್ನು ಖಚಿತಪಡಿಸಿಕೊಂಡ ನಂತರ ಬೇಗನೆ ಉಪವಾಸವನ್ನು ತೊರೆಯುವವರೆಗೆ ಒಳಿತಿನಲ್ಲಿರುತ್ತಾರೆ. ಇದು ಸುನ್ನತ್ಗೆ ಅನುಗುಣವಾಗಿ ನಡೆಯುವುದು ಮತ್ತು ಅದರ ಸೀಮೆಯೊಳಗೆ ನಿಲ್ಲುವುದಾಗಿದೆ.

http://www.sunnah.global/hadeeth/kn/show/4438